ಕಾರ್ಯಭಾರ ಇರುವ ಇತರ ಅನುದಾನಿತ ಖಾಸಗಿ ಪ್ರಾಥಮಿಕ ಶಾಲೆಗಳಿಗೆ ಹಂಚಿಕೆ ಮಾಡಲು ನಿಯಮಗಳಲ್ಲಿ ಅಸ್ಪದ ಇರುತ್ತದೆ. ಅದರಂತೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಊ) ಅನುದಾನಿತ ಶಾಲೆಗಳ ಶಿಕ್ಷಕರಿಗೆ ಸಕಾಲದಲ್ಲಿ ಸಹಾಯಾನುದಾನ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

1604 (1897) ಶ್ರೀ ಮುನಿಯಪ್ಪ ಎಸ್. ಎಂ. (ಚಿಕ್ಕಬಳ್ಳಾಪುರ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರದಲ್ಲಿ ಸಂಜೆ ಕಾಲೇಜು ನಷ್ಟದಲ್ಲಿ ನಡೆಯುತ್ತಿರುವ ವಿಚಾರ ಸರ್ಕಾರದ ಗಮನದಲ್ಲಿ ಇದೆಯೇ;

ಆ) ಚಿಕ್ಕಬಳ್ಳಾಪುರ ನಗರದಲ್ಲಿ ಪ್ರತ್ಯೇಕ ಮಹಿಳಾ ಕಾಲೇಜು ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಸಂಜೆ ಕಾಲೇಜನ್ನು ಬದಲಾಯಿಸಿ ಪ್ರತ್ಯೇಕ ಮಹಿಳಾ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳುವುದು?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲ

ಆ) ಇಲ್ಲ

ಇ) ಅಂತಹ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.

1606 (1899) ಶ್ರೀ ಮುನಿಯಪ್ಪ ಎಸ್. ಎಂ. (ಚಿಕ್ಕಬಳ್ಳಾಪುರ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರನ್ನು ನೇಮಕ ಮಾಡುವುದು ಕಡ್ಡಾಯವಲ್ಲವೆ;